2011ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ ವಿಧೇಯಕವನ್ನು ಮಂಡಿಸಲು ಸಭೆಯ ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಲಿ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ–7

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಪರ್ಯಾಲೋಚನಾ ಪ್ರಸ್ತಾವ

(ಅ) ಕರ್ನಾಟಕ ಮೂಲಗೇಣಿ ಅಥವಾ ಒಳಮೂಲಗೇಣಿ ಗೇಣಿದಾರರಿಗೆ ಮಾಲೀಕತ್ವವನ್ನು ಪ್ರಧಾನ ಮಾಡುವ ವಿಧೇಯಕ, 2011

ಡಾ: ವಿ. ಎಸ್. ಆಚಾರ್ಯ (ಉನ್ನತ ಶಿಕ್ಷಣ ಸಚಿವರು): (ಕಂದಾಯ ಸಚಿವರ ಪರವಾಗಿ); ರಾಜ್ಯದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮೂಲ ಗೇಣಿ ಎಂದು ಹೇಳುವಂಥ ಗೇಣಿ ಪದ್ಧತಿ ಚಾರಿತ್ರಿಕ ಕಾರಣದಿಂದ ಇನ್ನೂ ಚಾಲ್ತಿಯಲ್ಲಿದೆ. ಇದರಂತೆ ಆ ಮೂಲ ಗೇಣಿದಾರನಿಗೆ ಆ ಜಾಗದ marketable title ಅವನಿಗಿದೆ. ಆದರೆ, ವರ್ಷಕ್ಕೆ ಒಂದಿಷ್ಟು 10 ರೂಪಾಯಿಗಳೋ 15 ರೂಪಾಯಿಗಳೋ ಮೂಲದಾರನಿಗೆ ಅಂದರೆ ಅದರ

original ಗೇಣಿದಾರನಿಗೆ ಕೊಡಬೇಕಾಗುತ್ತದೆ, ಸಂದಾಯ ಮಾಡ ಬೇಕಾಗುತ್ತದೆ. ಇದೊಂದು ತರಹ ಖಾಯಂ ಗೇಣಿ. ಆದರೆ, ಅಲ್ಲಿ ಇಲ್ಲಿ ಒಂದೊಂದು caseನಲ್ಲಿ ಈ ಮೂಲದಾರ (ಮೂಲಗೇಣಿದಾರ) ಇನ್ನೊಬ್ಬನಿಗೆ ಮಾರಾಟ ಮಾಡುವಾಗ ತನ್ನ ಅನುಮತಿ ಕೊಡಬೇಕೆಂತಲೋ ಅಥವಾ ಇನ್ನೇನೋ ಸಣ್ಣಪುಟ್ಟ ಕಾರಣಗಳಿರುತ್ತವೆ. ಆದರೆ, ಭೂಮಿ ಅವನಿಗೆ ವಾಪಸ್ಸು ಬರುವ ಪ್ರಶ್ನೆ ಇಲ್ಲ. ಗೇಣಿ ಕೊಟ್ಟ ದಿವಸ ಮೂಲ ಗೇಣಿದಾರನಿಗೆ ಅನ್ವಯಿಸಿರಬಹುದು. ಆದರೆ, ಇದರಿಂದ ಒಂದು ರೀತಿಯ ಊಳಿಗಮಾನ್ಯ ಪದ್ಧತಿ ಚಾಲ್ತಿಯಲ್ಲಿರುವಂಥ ಸಂದರ್ಭವಿರುವುದರಿಂದ ಮತ್ತು ಮೂಲದಾರನಿಗೇ ಮತ್ತು ಮೂಲಗೇಣಿದಾರನಿಗೆ ಇಬ್ಬರಿಗೂ ಅನುಕೂಲವಿಲ್ಲ ದಿರುವುದರಿಂದ ನಾವು ಈ ವಿಷಯದಲ್ಲಿ ಮೂಲಗೇಣಿದಾರನಿಗೆ ಅವನ ಭೂಮಿಯ ಪೂರ್ತಿ ಮಾಲೀಕತ್ವವನ್ನು ಕೊಡುವುದು, ಮೂಲದಾರನಿಗೆ ಅವನಿಗೇ ಸಂದಾಯವಾಗುವಂಥ ಗೇಣಿಯ ಬಗ್ಗೆ ಪರಿಹಾರವನ್ನು ಕೊಡುವುದು ಎಂದು ಹೇಳುವಂಥ ತೀರ್ಮಾನವನ್ನು ಸರ್ಕಾರ ಮಾಡಿ ಸಾಮಾನ್ಯ ವಿಷಯದಲ್ಲಿ ಆ ಗೇಣಿಯ 500 ಪಾಲಿನಷ್ಟು ಪರಿಹಾರ, ಒಂದು ವೇಳೆ ಏನಾದರೂ conditionalities ಇದ್ದಂಥ ಸಂದರ್ಭದಲ್ಲಿ ಸಾವಿರ ಪಾಲು ಪರಿಹಾರಕ್ಕೆ ಬೇಕಾದಂಥ ವ್ಯವಸ್ಥೆಯನ್ನು ಮಾಡಿ ತಹಶೀಲ್ದಾರರಿಗೆ ಅರ್ಜಿ ಕೊಡಬೇಕು, ಅರ್ಜಿ ಕೊಟ್ಟ ನಂತರ ಅವರು ವಿಚಾರಣೆ ಮಾಡಿ ಎಷ್ಟು ಪರಿಹಾರ ಕಟ್ಟಬೇಕು ಎಂದು ಸೂಚನೆ ಕೊಟ್ಟ ಪ್ರಕಾರ ಅವರು ಪರಿಹಾರ ಕೊಟ್ಟರೆ ಒಂದು ತಿಂಗಳೊಳಗೆ ಅವನಿಗೆ ಬೇಕಾದಂಥ ಅದರ ಹಕ್ಕನ್ನು ಕೊಡುವಂಥದ್ದು ಮತ್ತು appeal ಇದ್ದರೆ Assistant Commissioner ರವರ ಹತ್ತಿರ ಹೋಗುವಂಥದ್ದು ಇದೆ. ಇದೆಲ್ಲ provision ಮಾಡಿದ್ದೇವೆ. ಬಹುಕಾಲದಿಂದ ಇದ್ದಂತ ಅವ್ಯವಸ್ಥೆ ಇದು, ಇದರಿಂದ ಕೊನೆಗಾಣುತ್ತದೆ. ಹಿಂದೆ, ಶ್ರೀ ಜಗದೀಶ್ ಶೆಟ್ಟರ್‌ರವರು ಕಂದಾಯ ಮಂತ್ರಿಯಾಗಿದ್ದಾಗಿನಿಂದಲೂ ಆ ಎರಡು ಜಿಲ್ಲೆಗಳಿಗೆ ಸಂಬಂಧಪಟ್ಟಂತೆ ಪ್ರಯತ್ನ ನಡೆಯುತ್ತಿತ್ತು. ಈ ಬಿಲ್ ಅನ್ನು ಮಸೂದೆಯನ್ನು ಪರ್ಯಾಲೋಚನೆಗೆ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. 2011ನೇ ಸಾಲಿನ ಕರ್ನಾಟಕ ಮೂಲಗೇಣಿ ಅಥವಾ ಒಳಮೂಲಗೇಣಿ ಗೇಣಿದಾರರಿಗೆ ಮಾಲೀಕತ್ವವನ್ನು ಪ್ರಧಾನ ಮಾಡುವ ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದಿದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅನುಮೋದನೆ ದೊರಕಿದೆ.

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.

2–12ನೇ ಖಂಡಗಳು ವಿಧೇಯಕದ ಅಂಗವಾಗಿರಬೇಕೆನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ.

2ರಿಂದ 12ರವರೆಗಿನ ಖಂಡಗಳು ವಿಧೇಯಕದ ಅಂಗವಾದವು.

ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ

ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಿರಬೇಕೆಂದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಅಧ್ಯಕ್ಷರು: ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸಬಹುದು.

ಡಾ. ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು): (ಕಂದಾಯ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಮೂಲಗೇಣಿ ಅಥವಾ ಒಳಮೂಲಗೇಣಿ ಗೇಣಿದಾರರಿಗೆ ಮಾಲೀಕತ್ವವನ್ನು ಪ್ರಧಾನ ಮಾಡುವ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ಮೂಲಗೇಣಿ ಅಥವಾ ಒಳಮೂಲಗೇಣಿ ಗೇಣಿದಾರರಿಗೆ ಮಾಲೀಕತ್ವವನ್ನು ಪ್ರಧಾನ ಮಾಡುವ ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಆ) ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕ, 2011

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಲಿ ಸಚಿವರು): ಈ NURM ಯೋಜನೆಯಡಿ ಯಾವ್ಯಾವ ನಗರಗಳಲ್ಲಿ 3 ಲಕ್ಷಕ್ಕಿಂತ ಜಾಸ್ತಿ ಜನಸಂಖ್ಯೆ ಇದೆ ಅಲ್ಲಿ ನಾಗರೀಕರ